# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 416 (427) |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ ರುದ್ರಪ್ಪ(ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12/12/2024. |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳು ಗೊಂದಲಕ್ಕೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮ ಮತ್ತು ಪ್ರಸಕ್ತ ವರ್ಷದಲ್ಲಿ ಎಷ್ಟು ಅವಾಂತರಗಳನ್ನು ಆಯೋಗವು ಮಾಡಿದೆ; (ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆಯಾಗಿದ್ದು, ಕರ್ನಾಟಕ ನಾಗರೀಕ ಸೇವೆಯ ವಿವಿಧ ವೃಂದದ ಹುದ್ದೆಗಳ ಆಯ್ಕೆ ಪ್ರಾಧಿಕಾರವಾಗಿರುತ್ತದೆ. ಸರ್ಕಾರವು ಕಾಲಕಾಲಕ್ಕೆ ರೂಪಿಸುವ ನಿಯಮಗಳು ಮತ್ತು ಆದೇಶಗಳನ್ವಯ ಹಾಗೂ ಚಾಲ್ತಿಯಲ್ಲಿರುವ ನೇಮಕಾತಿ ನಿಯಮಗಳನ್ವಯ ಪರೀಕ್ಷಾ ಪ್ರಕ್ರಿಯೆಗಳನ್ನು ಕೈಗೊಳ್ಳುತ್ತದೆ. ಕಳೆದ ಒಂದು ವರ್ಷದಲ್ಲಿ 11 ಪರೀಕ್ಷೆಗಳನ್ನು ಯಾವುದೇ ಲೋಪದೋಷಗಳಿಲ್ಲದೆ ಸುಲಲಿತವಾಗಿ ಆಯೋಗವು ನಡೆಸಿರುತ್ತದೆ.<br><br>ಈ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ ಈ ಕೆಳಕಂಡ 02 ಪರೀಕ್ಷೆಗಳಲ್ಲಿ ಕೆಲವು ಗೊಂದಲಗಳಾಗಿದ್ದು, ವಿವರ ಕೆಳಕಂಡಂತಿದೆ.<br><br>1) ಕರ್ನಾಟಕ ಲೋಕಸೇವಾ ಆಯೋಗದಿಂದ 2023-24ನೇ ಸಾಲಿನ 384 - ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ನೇಮಕಾತಿಗಾಗಿ ದಿನಾಂಕ:27-08-2024 ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯಲ್ಲಿನ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಕೆಲವು ಪ್ರಶ್ನೆಗಳಲ್ಲಿ ಭಾಷಾಂತರ ಲೋಪ ಕಂಡುಬಂದಿದೆ ಎಂದು ಹಲವಾರು ಅಭ್ಯರ್ಥಿಗಳು ತೀವ್ರವಾಗಿ ಪ್ರತಿಭಟನೆಯನ್ನು ನಡೆಸಿದ ಹಿನ್ನೆಲೆಯಲ್ಲಿ ದಿನಾಂಕ: 29.12.2024 ರಂದು ಮರುಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿರುತ್ತದೆ.<br><br>ಮರು ಪರೀಕ್ಷೆಯನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂಖ್ಯೆ: 106087/2024 ದಾಖಲಾಗಿದ್ದು, ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ. ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>2) ದಿನಾಂಕ:17-11-2024 ರಂದು ನಡೆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ |
| ಆ) | ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಯ ಯಡವಟ್ಟಿನಿಂದ ರಾಜ್ಯದ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಿಸುವುದು) | |

| | | |
|---|---|---|
| | | ಇಲಾಖೆಯಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹೈ.ಕ.) ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಆಯೋಗದಿಂದ ಯಾವುದೇ ಲೋಪವಾಗಿರುವುದಿಲ್ಲ. ಪರೀಕ್ಷಾ ಕೊಠಡಿಗಳಿಗೆ ಪ್ರಶ್ನೆ ಪತ್ರಿಕೆ ಪ್ಯಾಕೆಟ್‌ಗಳನ್ನು ವಿತರಿಸುವ ಸಂದರ್ಭದಲ್ಲಿ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಗಳಲ್ಲಿ ಗದ್ದಲ ಉಂಟು ಮಾಡಿರುವ ಬಗ್ಗೆ ಜಿಲ್ಲಾಧಿಕಾರಿಯವರಿಂದ ವರದಿ ಪಡೆಯಲಾಗಿದ್ದು, ಘಟನೆ ಕುರಿತು ಸಮಗ್ರ ತನಿಖೆ ನಡೆಸಲು ಕರ್ನಾಟಕ ಲೋಕಸೇವಾ ಆಯೋಗವು 03 ಸದಸ್ಯರ ಉಪ ಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ನೀಡುವ ವರದಿಯಂತೆ ಆಯೋಗವು ಕ್ರಮಕೈಗೊಳ್ಳಲು ನಿರ್ಣಯಿಸಿರುತ್ತದೆ. |
| ಇ) | ಕಳೆದ 01 ವರ್ಷದಲ್ಲಿ ಸದರಿ ಆಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನ್ಯತೆಗಳಿಗೆ ಹೊಣೆ ಯಾರು: ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ: ಜರುಗಿಸಿದ್ದಲ್ಲಿ ಯಾವ ಯಾವ ಅಧಿಕಾರಿಗಳ ವಿರುದ್ಧ ಯಾವ ಯಾವ ಕ್ರಮಗಳನ್ನು ಜರುಗಿಸಲಾಗಿದೆ: ಜರುಗಿಸದಿದ್ದಲ್ಲಿ ಯಾವ ಕಾರಣಕ್ಕಾಗಿ ಜರುಗಿಸಿರುವುದಿಲ್ಲ: (ಈ ಕುರಿತು ಸಂಪೂರ್ಣ ಮಾಹಿತಿ ಮತ್ತು ಸೂಕ್ತ ಕಾರಣದೊಂದಿಗೆ ವಿವರಿಸುವುದು) | ಕಳೆದ 01 ವರ್ಷದಲ್ಲಿ ಕೆಳಕಂಡ 02 ಪ್ರಕರಣಗಳು ಗಮನಕ್ಕೆ ಬಂದಿದ್ದು, ವಿವರ ಕೆಳಕಂಡಂತಿವೆ.<br>1. ದಿನಾಂಕ:27-08-2024 ರಂದು ನಡೆಸಿದ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಿನ ಕನ್ನಡ ಪ್ರಶ್ನೆಗಳ ಭಾಷಾಂತರದಲ್ಲಿ ಲೋಪವಾಗಿದೆ ಎಂದು ಅಭ್ಯರ್ಥಿಗಳು ತೀವ್ರವಾಗಿ ಪ್ರತಿಭಟನೆಯನ್ನು ನಡೆಸಿದ ಹಿನ್ನೆಲೆಯಲ್ಲಿ ದಿನಾಂಕ: 29.12.2024 ರಂದು ಮರುಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿರುತ್ತದೆ. ಅಲ್ಲದೇ, ಆಯೋಗದಿಂದ ವಿವರಣೆ ಪಡೆಯಲಾಗಿದ್ದು, ಈ ಸಂಬಂಧ ಆಯೋಗವು ಮೂವರು ವಿಷಯ ತಜ್ಞರುಗಳನ್ನೊಳಗೊಂಡ ಒಟ್ಟು 11 ಸಮಿತಿಗಳನ್ನು ರಚಿಸಿ ವರದಿ ಪಡೆದಿರುತ್ತದೆ. ಸದರಿ ವರದಿಯಲ್ಲಿ ಭಾಷಾಂತರದ ಲೋಪದಿಂದಾಗಿ ಪತ್ರಿಕೆ-1 ರಲ್ಲಿ 05 ಪ್ರಶ್ನೆಗಳಿಗೆ ಹಾಗೂ ಪತ್ರಿಕೆ- 02 ರಲ್ಲಿನ 05 ಪ್ರಶ್ನೆಗಳ ಕೀ-ಉತ್ತರಗಳು ಪರಿಷ್ಕೃತಗೊಳ್ಳಲಿವೆ ಎಂದು ವಿಷಯ ತಜ್ಞರು ಅಭಿಪ್ರಾಯವನ್ನು ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ, ಸರ್ಕಾರದ ಹಂತದಲ್ಲಿ ಹಲವಾರು ಸಭೆಗಳನ್ನು ನಡೆಸಿ, ಆಯೋಗದಲ್ಲಿ ಪರಿಣಿತ ಭಾಷಾಂತರಕಾರರಿಗೆ ಜವಾಬ್ದಾರಿ ನೀಡುವುದು ಹಾಗೂ ಭಾಷಾಂತರವನ್ನು ಖಚಿತಗೊಳಿಸಲು ಪ್ರಶ್ನೆ ಪತ್ರಿಕೆ ಸಿದ್ಧಪಡಿಸಿದವರನ್ನು ಜವಾಬ್ದಾರರನ್ನಾಗಿ ಮಾಡಲು ಕ್ರಮವಹಿಸುವುದು ಮತ್ತು ಮುಂದಿನ ದಿನಗಳಲ್ಲಿ ಈ ರೀತಿ ಲೋಪದೋಷಗಳಾಗದಂತೆ ಜಾಗರೂಕತೆಯಿಂದ ಮತ್ತು ಪಾರದರ್ಶಕತೆಯಿಂದ ಪರೀಕ್ಷೆಗಳನ್ನು ನಡೆಸುವಂತೆ ಆಯೋಗಕ್ಕೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.<br>2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಗ್ರೂಪ್-ಸಿ ಹೈದ್ರಾಬಾದ್-ಕರ್ನಾಟಕ ವೃಂದದ 97 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:17-11-2024 ರಂದು ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಸರ್ಕಾರಿ ಪದವಿ |
| ಈ) | ಈ ಆಯೋಗದ ಪರೀಕ್ಷೆ ನಡೆಸುವ ಯಡವಟ್ಟಿನಿಂದಾಗಿ ಉದ್ಯೋಗಾಕಾಂಕ್ಷಿಗಳು ಆಯೋಗದ ಮೇಲೆ ವಿಶ್ವಾಸ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಸರ್ಕಾರದ ಕ್ರಮಗಳೇನು? | |

| | | | |
|---|---|---|---|
| | | | ಮಹಾವಿದ್ಯಾಲಯದಲ್ಲಿ ನಡೆದ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಗೊಂದಲ ಉಂಟಾಗಿದ್ದು, ಪರೀಕ್ಷಾ ಕೇಂದ್ರದ ಎಲ್ಲಾ ಸಿ.ಸಿ.ಟಿ.ವಿ ಕ್ಯಾಮಾರಗಳ ಫೂಟೇಜ್‌ಗಳನ್ನು ಪರೀಕ್ಷಿಸಿ ಯಾವುದೇ ಪ್ರಶ್ನೆಪತ್ರಿಕೆಯು ಸೋರಿಕೆ ಆಗಿರುವುದು ಕಂಡುಬಂದಿರುವುದಿಲ್ಲವೆಂದು ಹಾಗೂ ಪ್ರಶ್ನೆಪತ್ರಿಕೆಗಳ ಸೀಲ್ಡ್ ಟ್ರಂಕ್‌ಗಳನ್ನು ಸಿ.ಸಿ.ಟಿ.ವಿ ಕ್ಯಾಮರಾ ಕಣ್ಗಾವಲಿನಲ್ಲಿ ಇರಿಸಲಾಗಿರುತ್ತದೆ. ಬೆಳಿಗ್ಗೆ 9-26 ಗಂಟೆಗೆ ಅವುಗಳನ್ನು ವಿಡಿಯೋ ಚಿತ್ರಿಕರಿಸುತ್ತಾ, ಎಲ್ಲರ ಸಮ್ಮುಖದಲ್ಲಿ ತೆರೆಯಲಾಗಿರುತ್ತದೆ. ಕೊಠಡಿ ಸಂಖ್ಯೆ:05ಕ್ಕೆ ಹೊಂದಾಣಿಕೆ ಮಾಡುವ ಸಮಯದಲ್ಲಿ ಅದಕ್ಕೆ ಸಂಬಂಧಿಸಿದ ನಮೂನೆ-ಬಿ ಫಾರಂಗಳಿಗೆ ಪರೀಕ್ಷಾ ಅಭ್ಯರ್ಥಿಗಳ ಸಹಿ ಮಾಡಿಸಿ ಅವರ ಸಮ್ಮುಖದಲ್ಲಿ ತೆರೆದು ಹಂಚುವಾಗ ಕೆಲವು ಅಭ್ಯರ್ಥಿಗಳು ಪ್ರಶ್ನೆಪತ್ರಿಕೆ ಲೀಕ್ ಆಗಿರುವುದಾಗಿ ತಪ್ಪು ಭಾವಿಸಿ ಅನಗತ್ಯ ಗೊಂದಲ ಸೃಷ್ಟಿಸಿರುತ್ತಾರೆಂದು ಆಯೋಗವು ತಿಳಿಸಿರುತ್ತದೆ. ಈ ಘಟನೆಗೆ ಸಂಬಂಧಿಸಿದಂತೆ, ಸಿಂಧನೂರು ನಗರ ಪೊಲೀಸ್ ಠಾಣೆಯಲ್ಲಿ 12 ಅಭ್ಯರ್ಥಿಗಳು ಹಾಗೂ ಇತರರ ವಿರುದ್ಧ ಎಫ್.ಐ.ಆರ್. ದಾಖಲಿಸಲಾಗಿದೆ.<br><br>ಈ ಘಟನೆ ಕುರಿತು ಸಮಗ್ರ ತನಿಖೆ ನಡೆಸಲು ಕರ್ನಾಟಕ ಲೋಕಸೇವಾ ಆಯೋಗವು 03 ಸದಸ್ಯರ ಉಪ ಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ನೀಡುವ ವರದಿಯಂತೆ ಕ್ರಮಕೈಗೊಳ್ಳಲು ನಿರ್ಣಯಿಸಿರುತ್ತದೆ. |

**ಸಿಆಸುಇ 232 ಎಸ್‌ಎಲ್‌ಎ 2024.**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ